ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ದಿನಾಂಕ 20.06.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ- ಅರ್ಜಿದಾರರ ಪರ ವಕೀಲರಿಂದಃ-**

ಚಾಲನಾ ಪರವಾನಗಿ, ವಿಮಾ ಪಾಲಿಸಿ, ವಾಹನ ನೋಂದಣಿ ಪ್ರಮಾಣಪತ್ರ ಮತ್ತು ಪರವಾನಗಿ ಪ್ರಮಾಣಪತ್ರದ ದೃಢೀಕೃತ ನಕಲುಗಳನ್ನು ಹಾಜರುಪಡಿಸುತ್ತಿದ್ದು, ಅವುಗಳನ್ನು ನಿ.ಪಿ 17 ರಿಂದ 20 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 3ನೇ ಎದುರುದಾರರ ಪರ ವಕೀಲರಿಂದಃ-**

ಅಪಘಾತವು ನನ್ನ ಜೀಪಿನ ಚಾಲಕನ ನಿರ್ಲಕ್ಷ್ಯತನದಿಂದ ಉಂಟಾಗಿರುತ್ತದೆಯೇ ಹೊರತು, 1ನೇ ಎದುರುದಾರರ ನಿರ್ಲಕ್ಯತನದಿಂದ ಉಂಟಾಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಪರಿಹಾರವನ್ನು ಪಡೆಯುವ ಉದ್ದೇಶದಿಂದ 1ನೇ ಎದುರುದಾರರ ವಿರುದ್ಧ ಸುಳ್ಳು ಅರ್ಜಿಯನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಈ ಅರ್ಜಿಯಲ್ಲಿ ಮತ್ತು ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರದಲಿಲ ನಮೂದಿಸಿರುವ ಹಣವನ್ನು ಚಿಕಿತ್ಸೆಗಾಗಿ ಖರ್ಚು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಅಪಘಾತವು ಮಳೆಗಾಲದಲ್ಲಿ ಸಂಭವಿಸಿರುತ್ತದೆ ಎಂದರೆ ಸರಿ. ಆ ಸಂದರ್ಭದಲ್ಲಿ ತೋಟಗಳಲ್ಲಿ ಯಾವುದೇ ಕೆಲಸ ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ತೋಟದ ಮೇಲ್ವಿಚಾರಣೆಯನ್ನು ನೋಡಿಕೊಳ್ಳಲು ಮೇಲ್ವಿಚಾರಕನನ್ನು ನೇಮಕ ಮಾಡಿರುವುದಿಲ್ಲ ಹಾಗೂ ಅದಕ್ಕೆ ಸಂಬಂಧಿಸಿದಂತೆ ಯಾವುದೇ ಹಣ ಖರ್ಚು

ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನನಗೆ ಅಪಘಾತದಿಂದ ಯಾವುದೇ ಅಂಗ ನ್ಯೂನ್ಯತೆ ಆಗಿರುವುದಿಲ್ಲ ಎಂದರೆ ಸರಿ. ನಾನು ಮೊದಲಿನ ರೀತಿಯಲ್ಲಿಯೇ ಈಗಲೂ ಕೆಲಸ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಪರಿಹಾರವನ್ನು ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಅಪಘಾತವು 1ನೇ ಎದುರುದಾರರ ನಿರ್ಲಕ್ಷ್ಯತನದಿಂದ ಉಂಟಾಗಿಲ್ಲದೇ ಇರುವುದರಿಂದ 3ನೇ ಎದುರುದಾರರು ಪರಿಹಾರವನ್ನು ನೀಡಲು ಭಾದ್ಯರಲ್ಲ ಎಂದರೆ ಸರಿಯಲ್ಲ. 3ನೇ ಎದುರುದಾರರ ವಿಮೆಗೆ ಒಳಪಟ್ಟ ಲಾರಿಯ ಚಾಲಕನಿಗೆ ಚಾಲನಾ ಪರವಾನಗಿ ಇರಲಿಲ್ಲ, ಆದುದ್ದರಿಂದ 3ನೇ ಎದುರುದಾರರು ಪರಿಹಾರವನ್ನು ನೀಡಲು ಭಾದ್ಯರಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಾಕ್ಷಿದಾರರ ಸಹಿ) ಸಹಿ

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.